ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

8

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19 [illegible]

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 26/8/2020

---

# ಡಿಕೆಶಿಗೆ ಕೊರೋನಾ: ಆಸ್ಪತ್ರೆಗೆ ದಾಖಲು

## 2 ದಿನದಿಂದ ಜ್ವರ, ನಿನ್ನೆ ಪರೀಕ್ಷೆಯಲ್ಲಿ ಪಾಸಿಟಿವ್ | ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 26/8

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಸೇರಿದಂತೆ ಹಲವು ಸಚಿವರು, ರಾಜಕೀಯ ನಾಯಕರ ಬಳಿಕ ಇದೀಗ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರಿಗೂ ಕೊರೋನಾ ದೃಢಪಟ್ಟಿದ್ದು, ಅವರು ಮಂಗಳವಾರ ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ.

ತೀವ್ರ ಬೆನ್ನುನೋವಿನಿಂದ ಬಳಲುತ್ತಿದ್ದ ಡಿ.ಕೆ.ಶಿವಕುಮಾರ್ ಅವರಿಗೆ ಕಳೆದ ಎರಡು ದಿನಗಳಿಂದ ಜ್ವರ ಕೂಡ ಕಾಣಿಸಿಕೊಂಡಿತ್ತು. ಈ ಹಿನ್ನೆಲೆಯಲ್ಲಿ ಅವರಿಗೆ ಕೋವಿಡ್ ಪರೀಕ್ಷೆ ನಡೆಸಿದ್ದು, ವರದಿಯಲ್ಲಿ ಪಾಸಿಟಿವ್ ಬಂದಿದೆ. ಸೋಂಕು ದೃಢಪಟ್ಟ ಕೂಡಲೇ ಅವರು ವೈದ್ಯರ ಸಲಹೆ ಮೇರೆಗೆ ರಾಜಾಜಿನಗರದ ಸುಗುಣ ಆಸ್ಪತ್ರೆಗೆ ದಾಖಲಾಗಿದ್ದಾರೆ.

ಈ ಸಂಬಂಧ ಸ್ವತಃ ಟ್ವೀಟ್ ಮಾಡಿರುವ ಡಿ.ಕೆ.ಶಿವಕುಮಾರ್, ನನಗೆ ಜ್ವರ ಇದ್ದು, ಪರೀಕ್ಷೆಯಲ್ಲಿ ಸೋಂಕು ದೃಢಪಟ್ಟಿದೆ. ನಾನು ಆರೋಗ್ಯವಾಗಿದ್ದೇನೆ. ಆದರೆ ಮುನ್ನೆಚ್ಚರಿಕೆ ಕ್ರಮವಾಗಿ ವೈದ್ಯರ ಸಲಹೆ ಮೇರೆಗೆ ಆಸ್ಪತ್ರೆಗೆ ದಾಖಲಾಗಿದ್ದೇನೆ. ನಿಮ್ಮೆಲ್ಲರ ಆಶೀರ್ವಾದ ಮತ್ತು ಹಾರೈಕೆಯೊಂದಿಗೆ



ಬೇಗ ಗುಣಮುಖನಾಗಿ ಬರುತ್ತೇನೆ: ನನ್ನೊಂದಿಗೆ ಸಂಪರ್ಕಕ್ಕೆ ಬಂದಿದ್ದ ಎಲ್ಲರೂ ಎಚ್ಚರ ವಹಿಸಿ ಎಂದು ಮನವಿ ಮಾಡಿದ್ದಾರೆ.

ಈ ಮಧ್ಯೆ, ಸೋಂಕು ದೃಢಪಟ್ಟ ಹಿನ್ನೆಲೆಯಲ್ಲಿ ಉತ್ತರ ಕರ್ನಾಟಕ ಭಾಗದ ನೆರೆ ಪ್ರದೇಶಗಳಿಗೆ ಕೆಪಿಸಿಸಿ ಅಧ್ಯಕ್ಷರ ಭೇಟಿ ಕಾರ್ಯಕ್ರಮವನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ. ಕನಿಷ್ಠ ಒಂದು ವಾರ ಕಾಲ ಅವರು ಆಸ್ಪತ್ರೆಯಲ್ಲಿ ಇರಬೇಕಾಗಿರುವುದರಿಂದ ಪಕ್ಷದ ಮೂವರು ಕಾರ್ಯಾಧ್ಯಕ್ಷರ ನೇತೃತ್ವದಲ್ಲಿ ಪ್ರವಾಹ ಪೀಡಿತ ಪ್ರದೇಶಗಳಿಗೆ ಕಾಂಗ್ರೆಸ್ ತಂಡಗಳ ಭೇಟಿಗೆ ಸೂಚಿಸುವ ಸಾಧ್ಯತೆಯೂ ಇದೆ ಎನ್ನಲಾಗಿದೆ.

### ಸೋನಿಯಾ, ರಾಹುಲ್ ಸೇರಿ ಹಲವರಿಂದ ಹಾರೈಕೆ

ಶಿವಕುಮಾರ್‌ಗೆ ಸೋಂಕು ದೃಢಪಟ್ಟ ವಿಷಯ ತಿಳಿದ ಎಐಸಿಸಿ ಹಂಗಾಮಿ ಅಧ್ಯಕ್ಷೆ ಸೋನಿಯಾ ಗಾಂಧಿ, ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಮುಖ್ಯಮಂತ್ರಿ ಯಡಿಯೂರಪ್ಪ ಸೇರಿದಂತೆ ಹಲವು ಗಣ್ಯರು ಶೀಘ್ರ ಗುಣಮುಖರಾಗಲೆಂದು ಹಾರೈಸಿದ್ದಾರೆ. ಸೋನಿಯಾ, ರಾಹುಲ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಶಿವಕುಮಾರ್‌ಗೆ ಕರೆ ಮಾಡಿ ಆರೋಗ್ಯ ವಿಚಾರಿಸಿ ಶೀಘ್ರ ಗುಣಮುಖರಾಗು ವಂತೆ ಹಾರೈಸಿದರು. ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ, ಸಚಿವರಾದ ಡಾ.ಕೆ.ಸುಧಾಕರ್ ಸಹ ಶಿವಕುಮಾರ್ ಅವರು ಶೀಘ್ರ ಕೋವಿಡ್‌ನಿಂದ ಗುಣಮುಖರಾಗಿ ಎಂದಿನಂತೆ ಕ್ಷೇತ್ರ ಕಾರ್ಯದಲ್ಲಿ ಸಕ್ರಿಯರಾಗಿ ತೊಡಗಿಕೊಳ್ಳಲಿ ಎಂದು ಟ್ವೀಟ್ ಮಾಡಿ ಹಾರೈಸಿದ್ದಾರೆ.